

ಬೆಳಗಾವಿ: ಇಂದು ಬೆಳಗ್ಗೆ ಗೌರವಾನ್ವಿತ ಮೇಯರ್ ಶ್ರೀಮತಿ. ಸವಿತಾ ಕಾಂಬ್ಳೆ ಅವರು ನಿವಾಸಿಗಳ ಬಹುದಿನಗಳ ಬೇಡಿಕೆಯಾಗಿದ್ದ ಆರ್‌ಸಿಸಿ ಚರಂಡಿ ಕಾಮಗಾರಿಗೆ ಸವಿತಾ ಕಾಂಬಳೆ ಟಿವಿ ಸೆಂಟರ್ ಕೇಂದ್ರದಲ್ಲಿ ಭೂಮಿ ಪೂಜೆ ನೆರವೇರಿಸಿದರು ಅಲ್ಲಿಯ ನಗರ ಸೇವಕರಾದ್ ಸಂದೀಪ ಜಿರಗ್ಯಾಳ ಮಾತನಾಡಿ ನಮ್ಮ 32ರ ವಾರ್ಡ್‌ನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ನಾಗರಿಕರ ಕುಂದುಕೊರತೆಗಳನ್ನು ಆಲಿಸಿದ ಮೇಯರ್ ಮೇಡಂ ಅವರಿಗೆ ಧನ್ಯವಾದಗಳು ಮತ್ತು ಮುಂದಿನ ದಿನಗಳಲ್ಲಿ ನಮ್ಮ ವಾರ್ಡ್‌ನಲ್ಲಿ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.ಇಲ್ಲಿ ಎಲ್ಲ ಜನರ ಹಾಗೂ ನಾಗರಿಕ ನನ್ನ ಮೇಲೆ ಪ್ರೀತಿ ವಿಶ್ವಾಸವಿದೆ ಬರುವ ದಿನಗಳಲ್ಲಿ ಎಲ್ಲಾ ಪೂರ್ತಿ ಕಾಮಗಾರಿಗಳನ್ನು ಪೂರ್ಣಗೊಳಿಸುತ್ತೇನೆ ಎಂದು ಭರವಸೆ ನೀಡಿದರು.

# ಕಿಮ್ಸ್ ಸಂಸ್ಥೆಯ ವೈದ್ಯರ ಸೇವೆ ಶ್ಲಾಘನೀಯ: ಜಿ.ಎಸ್.ಪಾಟೀಲ



ಹುಬ್ಬಳ್ಳಿ ಮಾ.14: ಉತ್ತರ ಕರ್ನಾಟಕ ಭಾಗದ ಜನರಿಗೆ ಕಿಮ್ಸ್ ಸಂಸ್ಥೆಯು ಉತ್ತಮ ಚಿಕಿತ್ಸೆ ನೀಡುತ್ತಿದೆ. ಈ ಸಂಸ್ಥೆಯ ವೈದ್ಯರ ಸೇವೆ ಶ್ಲಾಘನೀಯವಾದುದು ಎಂದು ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್ ನ ಅಧ್ಯಕ್ಷರಾದ ಜಿ.ಎಸ್.ಪಾಟೀಲ್ ಹೇಳಿದರು.

ಇಂದು ಕಿಮ್ಸ್ ನ ಆಡಿಟೋರಿಯಂನಲ್ಲಿ ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್ ಇವರ ವತಿಯಿಂದ ಸಿ.ಎಸ್.ಆರ್. ನಿಧಿಯಡಿಯಲ್ಲಿ ರೂ.1 ಕೋಟಿ 75 ಲಕ್ಷ ವೆಚ್ಚದ ವೈದ್ಯಕೀಯ ಉಪಕರಣಗಳಾದ ನ್ಯೂಯೋನಟಲ್ ಇನ್ಕುಬೇಟರ್ಸ್ ಮತ್ತು ಆಪರೇಟಿಂಗ್ ಲ್ಯಾಪ್ರೋಸ್ಕೋಪಿ ಖರೀದಿಗಾಗಿ ಕಿಮ್ಸ್ ಗೆ ಚೆಕ್ ವಿತರಿಸುವ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

1957 ರಲ್ಲಿ ಕಿಮ್ಸ್ ಸಂಸ್ಥೆಯನ್ನು ಸ್ಥಾಪಿಸಲಾಯಿತು. ಕಿಮ್ಸ್ ಇಂದು ಹೆಮ್ಮರವಾಗಿ ಬೆಳೆದಿದೆ. ಕಿಮ್ಸ್ ಆಸ್ಪತ್ರೆಯಲ್ಲಿ ನನ್ನ ತಂದೆ ತಾಯಿಯವರು ಸಹ ಚಿಕಿತ್ಸೆ ಪಡೆದು ಗುಣಮುಖರಾಗಿದ್ದರು. ಪ್ರತಿನಿತ್ಯ 4 ಸಾವಿರಕ್ಕೂ ಅಧಿಕ ರೋಗಿಗಳು ಅಲ್ಲಿ ದಾಖಲಾಗುತ್ತಾರೆ. ಸಾವಿರಕ್ಕೂ ಅಧಿಕ ವೈದ್ಯರು ಕಾರ್ಯನಿರ್ವಹಿಸುತ್ತಿರುವರು. ಈ ಸಂಸ್ಥೆಯಲ್ಲಿ ಚಿಕಿತ್ಸೆ ಪಡೆದು ಅನೇಕರು ಗುಣಮುಖರಾಗಿದ್ದಾರೆ. ದೇಶದಲ್ಲಿ 100 ಗರ್ಭಿಣಿಯರಲ್ಲಿ 97 ಗರ್ಭಿಣಿಯರು ಹೆರಿಗೆ ಸಮಯದಲ್ಲಿ ಅಸುನೀಗುತ್ತಿದ್ದಾರೆ. ರಾಜ್ಯದಲ್ಲಿ ಹೆರಿಗೆ ಸಂದರ್ಭದಲ್ಲಿ 1000ರಲ್ಲಿ 24 ಮಕ್ಕಳು ಸಾವಿಗೀಡಾಗುತ್ತಿರುವರು. ಸುಧಾರಿತ ಆಧುನಿಕ ಯಂತ್ರೋಪಕರಣಗಳನ್ನು ಬಳಕೆ ಮಾಡಿಕೊಳ್ಳಬೇಕು. ಹೀಗಾಗಿ ಕಿಮ್ಸ್ ಗೆ ಅವಶ್ಯಕವಿರುವ ವೈದ್ಯಕೀಯ ಉಪಕರಣಗಳನ್ನು ಒದಗಿಸಲಾಗುತ್ತಿದೆ. ಗದಗ, ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳ ರೋಗಿಗಳು ಇಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಈ ಭಾಗದ ಊರುಗಳ ಜನರಿಗೆ ಒಳ್ಳೆಯ ಚಿಕಿತ್ಸೆ ನೀಡುವಲ್ಲಿ ವೈದ್ಯರು ಮುಂದಾಗಬೇಕು ಎಂದು ತಿಳಿಸಿದರು.

ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಬ್ಬಯ್ಯ ಪ್ರಸಾದ ಮಾತನಾಡಿ, ಉತ್ತರ ಕರ್ನಾಟಕಕ್ಕೆ ಕಿಮ್ಸ್ ಸಂಸ್ಥೆ ಸಂಜೀವಿನಿ ಆಗಿದೆ. ಇಲ್ಲಿನ ವೈದ್ಯರ ಸೇವೆ ಅನನ್ಯವಾದುದು. ಬೇರೆ ಖಾಸಗಿ ಆಸ್ಪತ್ರೆಯಲ್ಲಿ ಇಂತಹ ಸೇವೆ ದೊರೆಯುವುದಿಲ್ಲ. ಕೋವಿಡ ಸಂದರ್ಭದಲ್ಲಿ ನಾನು ಸಹ ಇಲ್ಲಿ ದಾಖಲಾಗಿದ್ದೆ. ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ಗುಣಮುಖರಾಗುವಂತೆ ವೈದ್ಯರು ಮಾಡಿದರು. ಹೆಚ್ಚಿನ ಪ್ರಮಾಣದ ಅನುದಾನ ಈ ಸಂಸ್ಥೆಗೆ ದೊರೆಯಬೇಕಿದೆ. ವೈದ್ಯರು ಮಾನವೀಯತೆ, ಮನುಷ್ಯತ್ವವನ್ನು ಹೊಂದಬೇಕಾಗಿದೆ. ಹೊಸ ಆವಿಷ್ಕಾರ, ಹೊಸ ತಂತ್ರಜ್ಞಾನವನ್ನು ನಾವು ಅಳವಡಿಸಿಕೊಳ್ಳುವುದು ಅವಶ್ಯಕವಾಗಿದೆ. ಇಂದು ಹಲವಾರು ಮಾರಣಾಂತಿಕ ಖಾಯಿಲೆಗಳು ಜನರಿಗೆ ಬರುತ್ತಿವೆ. ವಿವಿಧ ರೋಗಗಳ ಕುರಿತು ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳು ಆಯೋಜನೆಯಾಗಬೇಕಿದೆ. ವೈದ್ಯರು ಪ್ರಾಮಾಣಿಕ ಸೇವೆಯನ್ನು ಜನರಿಗೆ ನೀಡಬೇಕು. ಕಿಮ್ಸ್ ಗೆ ಹೆಚ್ಚಿನ ಅನುದಾನವನ್ನು ತರುವಲ್ಲಿ ಪ್ರಾಮಾಣಿಕವಾದ ಪ್ರಯತ್ನ ಮಾಡುತ್ತೇನೆ. ನನ್ನ ಕೈಲಾದ ಸಹಾಯ ಸಹಕಾರವನ್ನು ನೀಡುತ್ತೇನೆ ಎಂದು ಭರವಸೆ ನೀಡದರು.

ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್ ನ ವ್ಯವಸ್ಥಾಪಕ ನಿರ್ದೇಶಕರಾದ ಜಯವಿಭವ ಸ್ವಾಮಿ ಮಾತನಾಡಿ, ಕಿಮ್ಸ್ ಸಂಸ್ಥೆ ಅತಿ ಶ್ರೇಷ್ಠ ಸಂಸ್ಥೆಯಾಗಿದೆ. ಬಹಳಷ್ಟು ಹೊರ ಮತ್ತು ಒಳ ರೋಗಿಗಳಿಗೆ ಅತ್ಯುತ್ತಮ ಚಿಕಿತ್ಸೆ ನೀಡುವುದರ ಮೂಲಕ ಅವರು ಗುಣಮುಖರಾಗಿ ಹೋಗಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಉತ್ತಮ ಸೇವೆ ಸಲ್ಲಿಸಿದೆ. ಸಿ.ಎಸ್.ಆರ್. ನಿಧಿಯನ್ನು ಸರಿಯಾಗಿ ಬಳಕೆಯಾಗಬೇಕು. ಬಡವರಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆಯು ದೊರೆಯುವಂತಾಗಬೇಕಿದೆ. ಸಮಾಜಕ್ಕೆ ನಮ್ಮದೇಯಾದ ಕೊಡುಗೆ ನೀಡಿ ಎಂದರು.

ಮಾಜಿ ಸಚಿವರಾದ ಎ.ಎಂ.ಹಿಂಡಸಗೇರಿ, ಮಾಜಿ ಸಂಸದರಾದ ಪ್ರೊ.ಐ.ಜಿ.ಸನದಿ, ಎ.ಎಂ.ಕುಲಕರ್ಣಿ, ಬಿ.ಜಿ. ವಸ್ತ್ರದ, ಡಾ.ಸಿ.ಎಸ್.ಪಾಟೀಲ, ಐ.ಎಸ್.ಪಾಟೀಲ, ಮುಖಂಡರಾದ ಅನಿಲಕುಮಾರ ಪಾಟೀಲ, ಶರಣಪ್ಪ ಪಟಗಿ, ಕಿಮ್ಸ್ ಪ್ರಾಂಶುಪಾಲರಾದ ಡಾ.ಈಶ್ವರ ಹೊಸಮನಿ ಸೇರಿದಂತೆ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು. ಸುಕನ್ಯಾ ಪ್ರಾರ್ಥಿಸಿದರು. ಕಿಮ್ಸ್ ನಿರ್ದೇಶಕರಾದ ಡಾ.ಎಸ್.ಎಫ್.ಕಮ್ಮಾರ ಸ್ವಾಗತಿಸಿದರು. ಡಾ.ರಾಜಶೇಖರ ದ್ಯಾಬೇರಿ ನಿರೂಪಿಸಿದರು.

# 67.50 ಕೋಟಿ ರೂ.ಗಳ ವೆಚ್ಚದಲ್ಲಿ ಆಗ್ರಿ ಇನ್ನೋವೇಷನ್ ಸೆಂಟರ್ ಸ್ಥಾಪಿಸಲು ನಿರ್ಧಾರ

ಹೀಗಾಗಿ ಇವರು ಜಾಗ ಪಡೆದು ಈಗ ಬೇಡ ಎನ್ನುತ್ತಿದ್ದಾರೆ ಎಂದು ಪುನ: ನ್ಯಾಯಾಲಯದ ಮೊರೆ ಹೋಗಿದ್ದರು. ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಂಗ ನಿಂದನೆ ಪ್ರಕರಣವೆಂದು ಪರಿವರ್ತಿಸಿ ಭೂ ಸ್ವಾಧೀನವಾಗಿರುವುದರಿಂದ ಪರಿಹಾರ ಕೊಡಬೇಕು ಇಲ್ಲದಿದ್ದರೆ ಜಾಗ ಬೇಕಾಗಿಲ್ಲ ಎನ್ನುವ ತೀರ್ಮಾನಕ್ಕೆ ಬನ್ನಿ ಎಂದು ಸೂಚನೆ ನೀಡಿದೆ. ಈ ಬಗ್ಗೆ ಚರ್ಚಿಸಿ ಜಾಗ ರಸ್ತೆ ಅಗಲೀಕರಣಕ್ಕೆ ಅಗತ್ಯವಿದೆ ಎಂದು ತೀರ್ಮಾನಕ್ಕೆ ಸಚಿವ ಸಂಪುಟ ಬಂದಿದೆ. ಟಿ.ಡಿ.ಆರ್ ಕೊಡಲೂ ಕೂಡ ಸಂಪುಟ ತೀರ್ಮಾನಿಸಿದೆ.ವಿಧಾನಸೌಧ ಆವರಣದಲ್ಲಿ ತಾಯಿ ಭುವನೇಶ್ವರಿ ಪ್ರತಿಮೆ ಸ್ಥಾಪನೆಗೆ ತೀರ್ಮಾನ*ಕನ್ನಡ ನಾಡು, ನುಡಿ ಸಂಸ್ಕೃತಿಯ ಸಂಕೇತವಾದ ತಾಯಿ ಭುವನೇಶ್ವರಿ ಪ್ರತಿಮೆಯನ್ನು ವಿಧಾನಸೌಧದ ಆವರಣದಲ್ಲಿ ಸುಮಾರು 23 ಕೋಟಿ ರೂ. ವೆಚ್ಚದಲ್ಲಿ ಸ್ಥಾಪನೆ ಮಾಡಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಆದಷ್ಟು ಬೇಗ ಈ ಕಾಮಗಾರಿಯನ್ನು ಪ್ರಾರಂಭಿಸುವ ಇಚ್ಛೆಯನ್ನು ಸಂಪುಟ ವ್ಯಕ್ತಪಡಿಸಿದೆ . ಕನ್ನಡ ನಾಡು ಏಕೀಕರಣಗೊಂಡು, ಕರ್ನಾಟಕ ಎಂಬ ಹೆಸರು ನಾಮಕರಣವಾಗಿ 50 ವರ್ಷ ಸಂದಿರುವ ಸಂದರ್ಭದಲ್ಲಿ ಕನ್ನಡದ ಪ್ರತೀಕದ ಗುರುತು ಸರ್ಕಾರದ ಆವರಣದಲ್ಲಿರಬೇಕೆಂಬ ಉದ್ದೇಶದಿಂದ ಈ ನಿರ್ಣಯ ಕೈಗೊಳ್ಳಾಗಿದೆ ಎಂದರು.ಬೆಂಗಳೂರಿಗೆ ಮೆಟ್ರೊ 3 ನೆ ಹಂತ ಯೋಜನೆಗೆ ಆಡಳಿತಾತ್ಮಕ ಅನುಮೋದನೆ* ಬೆಂಗಳೂರಿನ ವಾಹನ ದಟ್ಟಣೆ ನಿವಾರಿಸುವ ಸೂಕ್ತ ಕ್ರಮವೆಂದರೆ ಮೆಟ್ರೋ ವ್ಯವಸ್ಥೆ. ಈಗಾಗಲೇ ಮೆಟ್ರೋ ಹಂತ 2 ಎ ಮತ್ತು 2 ಬಿ ಕಾಮಗಾರಿ ಇನ್ನೆರಡು ವರ್ಷಗಳಲ್ಲಿ ಮುಕ್ತಾಯಗೊಳ್ಳಲಿದೆ. ಭವಿಷ್ಯದ ಅವಶ್ಯಕತೆಯನ್ನು ಗಮನದಲ್ಲಿರಿಸಿ ಮೆಟ್ರೋ ರೈಲು ಹಂತ–3 ನಿರ್ಮಾಣಕ್ಕೆ ಸಚಿವ ಸಂಪುಟ ಒಪ್ಪಿಗೆಯನ್ನು ನೀಡಿದ್ದು, 44.65 ಕಿ.ಮೀ ಉದ್ದದ ಎರಡು ಕಾರಿಡಾರ್ ಗಳನ್ನು ( ಕಾರಿಡಾರ್–1 ಜೆಪಿನಗರ 4 ನೇ ಹಂತದಿಂದ ಪಶ್ಚಿಮ ಹೊರವರ್ತುಲ ರಸ್ತೆಯುದ್ದಕ್ಕೂ ಕೆಂಪಾಪುರದವರೆಗೆ 32.15 ಕಿ.ಮೀ. ಹಾಗೂ ಕಾರಿಡಾರ್ –2 ಹೊಸಹಳ್ಳಿಯಿಂದ ಮಾಗಡಿ ರಸ್ತೆಯುದ್ದಕ್ಕೂ ಕಡಬಗೆರೆವರೆಗೆ 12.50 ಕಿ.ಮೀ.) ಒಟ್ಟು ಅಂದಾಜು ವೆಚ್ಚ ರೂ.15,611 ಕೋಟಿಗಳಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೆಟ್ರೋ 3 ಹಂತಕ್ಕೆ 2028ರಲ್ಲಿ ಚಾಲನೆ ನೀಡುವ ಗುರಿಯನ್ನು ಬಿಎಂಆರ್ ಸಿ ಎಲ್ ಸಂಸ್ಥೆಯವರು ತಿಳಿಸಿದ್ದಾರೆ. ಈ ಯೋಜನೆಯ ಶೇ.85 ರಷ್ಟು ವೆಚ್ಚವನ್ನು ರಾಜ್ಯಸರ್ಕಾರವೇ ಭರಿಸಲಿದ್ದು, ಉಳಿದ ಅನುದಾನವನ್ನು ಕೇಂದ್ರ ನೀಡಲಿದೆ. ನಗರದಲ್ಲಿ ಜನರ ಓಡಾಟಕ್ಕೆ ಉತ್ತಮ ಸಂಪರ್ಕ ಒದಗಿಸುವ ದಿಸೆಯಲ್ಲಿ ಈ ನಿರ್ಣಯವನ್ನು ಸಚಿವ ಸಂಪುಟ ಕೈಗೊಂಡಿದೆ ಎಂದರು.ಬೆಂಗಳೂರಿನ ಪೂರ್ವ ಭಾಗದಲ್ಲಿ ಟ್ರೀ ಪಾರ್ಕ್ ಸ್ಥಾಪನೆ* ಬೆಂಗಳೂರಿನ ಪೂರ್ವ ಭಾಗದವಾದ ಕೆ.ಆರ್.ಪುರ ತಾಲ್ಲೂಕಿನಲ್ಲಿ ಎನ್ ಜಿ ಇ ಎಫ್, ಬೆಂಗಳೂರು ಸಂಸ್ಥೆಯ 65 ಎಕರೆ ಜಾಗದಲ್ಲಿ 'ಟ್ರೀ ಪಾರ್ಕ್' ನಿರ್ಮಿಸಿ, ವಾಕಿಂಗ್ ಹಾಗೂ ಸೈಕ್ಲಿಂಗ್ ಪ್ರತ್ಯೇಕ ಟ್ರ್ಯಾಕ್, ಆಟದ ಮೈದಾನ ಸೇರಿದಂತೆ ಹಲವು ಸೌಕರ್ಯಗಳನ್ನು ಪಾರ್ಕ್ ನಲ್ಲಿ ಒದಗಿಸಲಾಗುವುದು. ಕುಟುಂಬದ ಎಲ್ಲ ವಯೋಮಾನದ ಸದಸ್ಯರು ಈ ಉತ್ತಮ ಪರಿಸರದಲ್ಲಿ ಆರೋಗ್ಯಕರ ಸಮಯ ಕಳೆಯಲು ಅನುಕೂಲವಾಗುವಂತೆ ಲಾಲ್ ಬಾಗ್ ,ಕಬ್ಬನ್ ಪಾರ್ಕ್ ರೀತಿಯಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಅಭಿವೃದ್ಧಿಪಡಿಸಲು ಸಚಿವ ಸಂಪುಟ ತೀರ್ಮಾನಿಸಿದೆ. ಕೋಟ್ಯಾಂತರ ರೂ.ಗಳ ಬೆಲೆ ಬಾಳುವ ಜಮೀನನ್ನು ಯಾವುದೇ ಕೈಗಾರಿಕೆಗಳಿಗೆ ನೀಡದೇ , ಸಾರ್ವಜನಿಕರ ಬಳಕೆಗಾಗಿ ಟ್ರೀ ಪಾರ್ಕ್ ನ್ನು ಅಂದಾಜು ವೆಚ್ಚ 11 ಕೋಟಿ ರೂಗಳಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿದೆ. ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿನ 7 ಜಿಲ್ಲೆಗಳಲ್ಲಿ ಹೊಸದಾಗಿ 33 ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡಗಳ ನಿರ್ಮಾಣ ಕಾಮಗಾರಿಯನ್ನು 132 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಲು ಸಚಿವ ಸಂಪುಟ ತೀರ್ಮಾನಿಸಿದೆ.

# ಸಾರ್ವಜನಿಕರ ಆಸ್ತಿ ರಕ್ಷಣೆಯಲ್ಲಿ ಇಲಾಖೆಯ ದಿಟ್ಟ ಹೆಜ್ಜೆ

(1 ನೇ ಪುಟದಿಂದ)

ಇದಕ್ಕಾಗಿ ಪೊಲೀಸ ಇಲಾಖೆಗೆ ಅಭಿನಂದಿಸುತ್ತೇನೆ ಎಂದರು. ಪೊಲೀಸ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸೌಜನ್ಯದಿಂದ ಕಾರ್ಯನಿರ್ವಹಿಸುವ ಮೂಲಕ ಆದರ್ಶ ಸಮಾಜ ನಿರ್ಮಾಣಕ್ಕೆ ಮುಂದಾಗಲಿ. ಪೊಲೀಸ ಇಲಾಖೆಯಲ್ಲಿನ ತಾಂತ್ರಿಕ ಆಧುನೀಕರಣಕ್ಕೆ ಅಗತ್ಯವಿರುವ ಸಂಪೂರ್ಣ ಬೆಂಬಲವನ್ನು ನೀಡಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಸಮಾಜದಲ್ಲಿ ಶಾಂತಿ, ಸುರಕ್ಷತೆ, ಸಮಾಧಾನ ತರಲು ಪೊಲೀಸ ಇಲಾಖೆ ಅಧಿಕಾರಿಗಳು ಜನಸ್ನೇಹಿ ಕಾರ್ಯಗಳ ಮೂಲಕ ಸಾಧ್ಯಮಾಡಬಹುದಾಗಿದೆ. ಪೊಲೀಸರೂ ಸಹ ಸಮಾಜಸೇವಕರು. ನೀವು ಮಾಡುವ ಒಳ್ಳೆಯ ಕಾರ್ಯ ಸರ್ಕಾರಕ್ಕೆ ಕೀರ್ತಿ ತರಲಿದೆ. ಸಂಸ್ಕೃತಿ ಸೇವೆ ಶಿಸ್ತಿಗೆ ಗದಗ ಜಿಲ್ಲೆ ಪೊಲೀಸ ಇಲಾಖೆ ಹಸರು ವಾಸಿಯಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಅವರು ಮಾತನಾಡಿ ಜಿಲ್ಲೆಯಲ್ಲಿ ಅಪರಾಧಗಳನ್ನು ತಡೆಗಟ್ಟಲು ಕಣ್ಗಾವಲು ವ್ಯವಸ್ಥೆಯಿಂದ ಬೀಗಹಾಕಿದ ಮನೆಗಳ ನಿಗಾವಹಿಸಲು ಉಪಯುಕ್ತವಾಗಿದೆ ಎಂದರು. ಸಹಾಯವಾಣಿ 9480021100 ಸಂಖ್ಯೆಗೆ ಃಜಟರಿ ಎಂದು ವಾಟ್ಸಪ್ ಮಾಡಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬ ಹುದಾಗಿದೆ ಎಂದು ಹೇಳಿದರು.ಪೊಲೀಸ್ ಜಾಗೃತಿ ವಾಹನ ಮೂಲಕ ಮನೆ ಕಳ್ಳತನ,ಸರ ಕಳ್ಳತನ, ವಾಹನ ಕಳವು, ಮಾದಕ ವಸ್ತುಗಳ ದುರ್ಬಳಕೆ, ಸಂಚಾರಿ ನಿಯಮದ ಬಗ್ಗೆ ಸಾರ್ವಜನಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.ಜನಸ್ನೇಹಿ ಪೊಲೀಸ ವ್ಯವಸ್ಥೆಗೆ ಗದಗ ಜಿಲ್ಲಾ ಪೊಲೀಸ ಇಲಾಖೆ ಸದಾ ಸಿದ್ಧವಾಗಿದೆ. ಸೈಬರ್ ಅಪರಾಧಗಳು ನಡೆದಲ್ಲಿ ಸಹಾಯವಾಣಿ ಸಂಖ್ಯೆ 1930 ತುರ್ತು ಸಂದರ್ಭದಲ್ಲಿ ತುರ್ತು ಸಹಾಯವಾಣಿ 112 ಗೆ ಸಾರ್ವಜನಕರು ಕರೆ ಮಾಡಿ ಸಹಾಯ ಪಡೆಯುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ ಅಧೀಕ್ಷಕ ಎಂ.ಬಿ. ಸಂಕದ ಸೇರಿದಂತೆ ಪೊಲೀಸ ಇಲಾಖೆಯ ಹಿರಿಯ ಅಧಿಕಾರಿಗಳು, ಗಣ್ಯರಾದ ಡಾ.ನಾಗನೂರ, ಪ್ರಭು ಬುರಬುರೆ, ಎಸ್.ಎನ್.ಬಳ್ಳಾರಿ, ಅಶೋಕ ಮಂದಾಲಿ, ಭಾಷಾ ಮಲ್ಲಸಮುದ್ರ, ಹಾಜರಿದ್ದರು.

# ಗಡಿದಾಖಲೆಗಳ ಹಸ್ತಾಂತರ



ಬೆಳಗಾವಿ: ಇದೇ ದಿ. 13 ರಂದು ಬೆಳಗಾವಿ ಜಿಲ್ಲಾಧಿಕಾರಿಗಳ ಸಭಾ ಭವನದಲ್ಲಿಕರ್ನಾಟಕಗಡಿ ಹಾಗೂ ನದಿ ರಕ್ಷಣಾಆಯೋಗದಅಧ್ಯಕ್ಷರಾದ ಸುಪ್ರೀಂಕೋರ್ಟಿನ ವಿಶ್ರಾಂತ ನ್ಯಾಯಮೂರ್ತಿಗಳಾದ ನ್ಯಾ.ಶಿವರಾಜ ಪಾಟೀಲರವರಅಧ್ಯಕ್ಷತೆಯಲ್ಲಿ ನಡೆದಕರ್ನಾಟಕ ಮಹಾರಾಷ್ಟಗಡಿ ಭಾಗದ ಗ್ರಾಮಗಳಲ್ಲಿ ಕಂಡು ಬಂದಿರುವಗಡಿಕುರಿತು ಸಮಸ್ಯೆ, ಆ ಕುರಿತು ಮೊಕದ್ದಮೆಗಳ ಬಗ್ಗೆ ಹಾಗೂ ನದಿಗಳ ವಿವಾದಗಳ ಕುರಿತು ಸಭೆಕರೆಯಲಾಗಿತ್ತು.

ಕರ್ನಾಟಕ ಮಹಾರಾಷ್ಟ್ರಗಡಿ ಹಂಚಿಕೆ ವಿವಾದಕುರಿತು ಸುಪ್ರೀಂಕೋರ್ಟಿನಲ್ಲಿ 2004ರಿಂದಲೂ ದಾವೆಚಾಲ್ತಿಯಲ್ಲಿದ್ದು, ಈ ಸದರಿದಾವೆದಾಖಲಿಸುವ ಪೂರ್ವದಲ್ಲಿ 1988ರಲ್ಲಿಯೇ ಖಾನಾಪೂರ ದಿವಾಣಿ ನ್ಯಾಯಾಲಯದಲ್ಲಿಗಡಿದಾವೆದಾಖಲಾಗಿತ್ತುಎಂದು ಹೇಳಿ ಸಭೆಯ ಗಮನ ಸೆಳೆದ ನ್ಯಾಯವಾದಿ, ಸಾಹಿತಿ ಮತ್ತುಗಡಿ ದಾಖಲೆಗಳ ಸಂಗ್ರಹಕಾರರವೀಂದ್ರ ನಂ. ತೋಟಿಗೇರತಮ್ಮ ಬಳಿ ಇರುವಖಾನಾಪೂರ ದಿವಾಣಿ ನ್ಯಾಯಾಲಯದಲ್ಲಿ ದಾಖಲಿಸಿದ ಗಡಿದಾವೆಯದಾವಾ ಪ್ರತಿ, ಸದರಿದಾವೆಯಲ್ಲಿ ಸಲ್ಲಿಸಲಾದ ಮಹಾರಾಷ್ಟ್ರ, ಕೇಂದ್ರ, ಕರ್ನಾಟಕ ಸರಕಾರಗಳು ದಾಖಲಿಸಿರುವ ಕೈಫಿಯತ್‌ಗಳು, ತೀರ್ಪು, ಡಿಕ್ರಿ, ಇದೇದಾವೆಗೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲಾ ನ್ಯಾಯಾಲಯದ ಮೇಲ್ಮನವಿ ಪ್ರತಿ, ಮೇಲ್ಮನವಿಯಲ್ಲಿಯಾದತೀರ್ಪು, ಡಿಕ್ರಿ, ಜೊತೆಗೆ ಸುಪ್ರೀಂಕೋರ್ಟಿನಲ್ಲಿತೋಟಿಗೇರವರು ದಾಖಲಿಸಿದ ಇಂಟರ್‌ವೆನಷನ್‌ಅರ್ಜಿ, ಸದರಿಇಂಟರ್‌ವೆನಷನ್‌ಅರ್ಜಿ ತೀರಸ್ಕರಿಸಿದ ನಂತರ ಸುಪ್ರೀಂಕೋರ್ಟಿನಲ್ಲಿ ದಾಖಲಿಸಿದ ಮೇಲ್ಮನವಿ ಪ್ರತಿಗಳನ್ನು ಒಳಗೊಂಡು 600 ದಾಖಲೆಗಳನ್ನು ನ್ಯಾಯಮೂರ್ತಿ ಶಿವರಾಜ ಪಾಟೀಲರವರಿಗೆ ಹಸ್ತಾಂತರಿಸಿದರು.ಕರ್ನಾಟಕ ಮಹಾರಾಷ್ಟ್ರಗಡಿ ವಿವಾದಇತ್ಯರ್ಥವಾಗುವವರೆಗೆ ಬೆಳಗಾವಿ ಜಿಲ್ಲೆ ವಿಭಜನೆ ಮಾಡಬಾರದೆಂದು ಹಕ್ಕು ಒತ್ತಾಯದ ಮನವಿಯನ್ನುರವೀಂದ್ರತೋಟಿಗೇರ, ರಾಜ್ಯ ವಕೀಲರ ಸಾಹಿತ್ಯ ಪರಿಷತ್‌ಜಿಲ್ಲಾಘಟಕದ ವತಿಯಿಂದ ನ್ಯಾ.ಶಿವರಾಜ ಪಾಟೀಲ ಅವರಿಗೆ ಅರ್ಪಿಸಿದರು.ಪರಿಷತ್‌ಒತ್ತಿಯಿಂದ ನ್ಯಾಯವಾದಿಗಳಾದ ಬಾಳು ಮಲಾಜುರೆ, ರುಕ್ಮೀಣಿ ಪಟ್ಟಣಕುಡಿ, ಸಮಾಜ ಸೇವಕರಾದ ಪ್ರಕಾಶ ಐಹೊಳ್ಳಿ, ಎಸ್. ಎವ್.ಪಾಟೀಲ, ಮಹಾಂತೇಶರೋಕ್ಕದಕಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ಸ್ವ ಸಹಾಯ ಗುಂಪುಗಳ ಸಾಧನಾ ಸಮಾವೇಶ



ಯಮಕನಮರಡಿ: ಮಹಿಳೆಯರು ತಮ್ಮಲ್ಲಿರುವ ಶಕ್ತಿಯನ್ನು ಗುರುತಿಸಿಕೊಂಡು ಸಾಧನೆ ಮಾಡಿದಲ್ಲಿ, ಸಮಾಜ ತನ್ನಂದತಾನೇ ಗುರುತಿಸಿ ಸತ್ಕರಿಸುವುದು ಎಂದು ಹುಣಸಿಕೊಳ್ಳಮಠದ ರಾಚೋಟಿ ಸ್ವಾಮೀಜಿ ಹೇಳಿದರು.ಅವರು ಯಮಕನಮರಡಿ ಹುಣಸಿ ಕೊಳ್ಳಮಠದ ಆವರಣದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಮಂಗಳವಾರ ಹಮ್ಮಿಕೊಂಡ 'ಸ್ವ ಸಹಾಯ ಗುಂಪುಗಳ ಸಾಧನಾ ಸಮಾವೇಶ್' ಉದ್ದೇಶಿಸಿ ಮಾತನಾಡಿದರು.ಮಕ್ಕಳಿಗೆ ತಾಯಿಯಿಂದ ಸಿಗುವಷ್ಟು ಸಂಸ್ಕಾರ, ಬುದ್ಧಿ ಬೇರೆ ಯಾರಿಂದಲೂ ಸಿಗುವುದಿಲ್ಲ. ತಾಯಂದಿರು ತಮ್ಮ ಮಕ್ಕಳ ಜತೆ ಸಮಯ ಕಳೆದು ಯಾವುದು ಕೆಟ್ಟದ್ದು, ಯಾವುದು ಒಳ್ಳೆಯದು ಎಂಬುದನ್ನು ಸಣ್ಣ ವಯಸ್ಸಿನಲ್ಲೆ ಕಲಿಸಿದಲ್ಲಿ ಅವರು ಜವಾಬ್ದಾರಿಯುತ ಪ್ರಜೆಗಳಾಗುವುರು ಎಂದರು.ಸಮಾವೇಶ ಉದ್ಘಾಟಿಸಿ ಜಿಲ್ಲಾ ನಿರ್ದೇಶಕ ವಿಠ್ಠಲ್ ಸಾಲಿ ಯಾನ್ ಮಾತನಾಡಿ ಧರ್ಮಸ್ಥಳ ಸಂಸ್ಥೆಯು ಮಹಿಳೆಯರ ಸಬಲಿಕರಣಕ್ಕೆ ಹಮ್ಮಿಕೊಂಡ ಯೋಜನೆ ವಿವರಿಸಿದರು.ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ, ಸಂಪನ್ಮೂಲ ವ್ಯಕ್ತಿ ಪಿ.ಜಿ.ಕೊಣ್ಣೂರ್ ಮಾತನಾಡಿ ಅಭಿವೃದ್ಧಿಯಲ್ಲಿ ಮಹಿಳಯರ ಪಾತ್ರ ಕುರಿತು ಮಾತನಾಡಿ ದರು. ನಿವೃತ್ತ ಶಿಕ್ಷಕ ಬಿ.ಎಂ.ಓಬನ್ನವರ ಉಪನ್ಯಾಸ ನೀಡಿ ಮಹಿಳೆಯರ ಕೈಯಲ್ಲಿನ ಹಣದಬಳಕೆ ಮತ್ತು ಪುರುಷರು ದುರ್ಬಳಕೆ ಮಾಡುವ ಕುರಿತು ಉಪನ್ಯಾಸ ನೀಡಿದರು. ತಾಲ್ಲೂಕು ಯೋಜನಾಧಿಕಾರಿ ಅನಿತಾ ಬಿ,ಜೆವಿಕೆ ಸಮನ್ವಯಾ ಧಿಕಾರಿ ಸುಮಾವತಿ ಉಪ್ಪಿನ್, ತಾಲ್ಲೂಕು ಕೃಷಿ ಅಧಿಕಾರಿ ಗೋಪಾಲ್, ವಲಯ ಮೇಲ್ವಿಚಾರಕಿ ಗೌರವ್ವ ಮುದುಕವಿ,ಸೇವಾ ಪ್ರತಿನಿಧಿಗಳಾದ ವಾಣಿಶ್ರೀ, ಯಶೋಧ, ಸವಿತಾ, ಮಂಜುಳಾ ಮಂಗಲ್,ಕಾಂಚನ, ಕಾವೇರಿ,ನೀತಾ ಸೇರಿದಂತೆ ಜನಸೇವಾಪ್ರತಿನಿಧಿಗಳು,ಸ್ವ ಸಹಾಯಸಂಘಗಳಸದಸ್ಯರುಪಾಲ್ಗೊಂಡಿದ್ದರು.

# 31 ರಂದು ಅಹಿಂಸಾ ರನ್ ಮ್ಯಾರಾಥಾನ




ಬೆಳಗಾವಿ.ಮಾರ್ಚ–: ಜೈನ ಇಂಟರ್ ನ್ಯಾಷನಲ್ ಟ್ರೆಡ ಆರ್ಗನೈಝೇಶನ ಜಿತೋ ಲೇಡಿಜ ವಿಂಗ ವತಿಯಿಂದ ಇದೇ ಮಾರ್ಚ 31 ರಂದು ಬೆಳಗಾವಿಯಲ್ಲಿ ಅಹಿಂಸಾ ರನ್ ಮ್ಯಾರಾಥಾನ ಓಟವನ್ನು ಆಯೋಜಿಸಲಾಗಿದೆ ಎಂದು ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ ಅವರು ಇಂದಿಲ್ಲಿ ಹೇಳಿದರು. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಜಿತೋ ಸಂಸ್ಥೆಯು ಇದೊಂದು ಅಂತರ್‌ರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದ್ದು ವಿಶ್ವದ 28 ದೇಶಗಳಲ್ಲಿ ಹಾಗೂ ಭಾರತದಲ್ಲಿ 69 ವಿಭಾಗಗಳನ್ನು ಹೊಂದಿದ್ದು, ಈ ಎಲ್ಲ ವಿಭಾಗಗಳಲ್ಲಿ ಈ ಅಹಿಂಸಾ ರನ್ನ ನಡೆಸಲಾಗುವುದೆಂದು ಅವರು ಹೇಳಿದರು. ಕಳೆದ 2023 ರಲ್ಲಿ ಆಯೋಜಿಸಲಾಗಿದ್ದ ಅಹಿಂಸಾ ರನ್ನ ಓಟದಲ್ಲಿ ಒಟ್ಟು 1.16 ಸಾವಿರ ಜನರು ಭಾಗವಹಿಸಿ ಈ ಓಟವನ್ನು ಯಶಸ್ವಿಗೊಳಿಸಿದ್ದರು. ಈ ವರ್ಷವೂ ಸಹ ಜನರು ಸಹಭಾಗಿತ್ವ ಹೆಚ್ಚಾಗುವ ನಿರೀಕ್ಷೆ ಹೊಂದಲಾಗಿದೆ. ಈ ಮ್ಯಾರಾಥಾನ ಓಟದ ನಿಮಿತ್ಯ ವಿಶ್ವದಲ್ಲೆಡೆ ಅಹಿಂಸೆಯನ್ನು ಪ್ರತಿಪಾದಿಸುವ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ಮ್ಯಾರಾಥಾನ ಓಟದ ಸಂಚಾಲಕಿ ಕೀರ್ತಿ ದೊಡ್ಡಣ್ಣವರ ಅವರು ಮಾತನಾಡಿ, ಮಾರ್ಚ 3 ರಂದು ಬೆಳಿಗ್ಗೆ 5:30 ಗಂಟೆಗೆ ಬೆಳಗಾವಿಯ ಕ್ಯಾಂಪ ಮರಾಠಿ ವಿದ್ಯಾನಿಕೇತನ ಶಾಲಾ ಮೈದಾನದಿಂದ ಈ ಓಟ ಆರಂಭವಾಗಲಿದೆ. ಈ ಓಟದಲ್ಲಿ 3 ಕಿಮಿ, 5 ಕಿಮೀ, ಹಾಗೂ 10 ಕಿಮೀ ಅಂತರದ ಅಹಿಂಸಾ ರನ್ ಮ್ಯಾರಾಥಾನ ಓಟ ನಡೆಯಲಿದೆ. ಈ ಓಟದಲ್ಲಿಬ ಭಾಗವಹಿಸುವ ಪ್ರತಿಯೊಬ್ಬರಿಗೂ ಟಿ ಶರ್ಟ, ಪದಕ, ಪ್ರಮಾಣ ಪತ್ರ, ಹಾಗೂ ಉಪಹಾರದ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದರು.ಈ ಓಟದಲ್ಲಿ ಭಾಗವಹಿಸುವವರು ತಮ್ಮ ಹೆಸರುಗಳನ್ನು ನೊಂದಾಯಿಸುವುದು ಕಡ್ಡಾಯವಾಗಿದೆ. ಈ ಮ್ಯಾರಾಥಾನ ಓಟದಿಂದ ಬಂದಂತಹ ಹಣದಲ್ಲಿ ಬೆಳಗಾವಿಯ ಸದಾಶಿವ ನಗರದಲ್ಲಿನ ಸರಕಾರಿ ಕನ್ನಡ ಶಾಲೆ ನಂ26 ಈ ಶಾಲೆಯ ಕಟ್ಟಡ ನಿರ್ಮಾಣಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಬಳಿಸಿಕೊಳ್ಳಲಾಗುವುದೆಂದು ಅವರು ತಿಳಿಸಿದರು. ಪತ್ರಿಕಾಗೋಷ್ಟಿಯಲ್ಲಿ ಜಿತೋ ಲೇಡಿಜ ವಿಂಗ ಕಾರ್ಯದರ್ಶಿ ಮಮತಾ ಜೈನ, ಜಿತೋ ಅಧ್ಯಕ್ಷ ವೀರಧವಲ ಉಪಾಧ್ಯೆ, ಜಿತೋ ಯುವ ಘಟಕದ ಅಧ್ಯಕ್ಷ ದೀಪಕ ಸುಬೇದಾರ, ಲೇಡಿಜ ವಿಂಗ ಸಮನ್ವಯಕ ಅಭಯ ಆದಿಮನಿ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ರೈತರ ಕೃಷಿ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲು ಆಗ್ರಹ

(1 ನೇ ಪುಟದಿಂದ)

ನೀಡದೇ ರೈತರನ್ನು ವಂಚಿ ಸುತ್ತಿದ್ದು, ಈ ಬಗ್ಗೆ ತಾಲೂಕು ಮಟ್ಟದ ಅಧಿಕಾರಿಗಳು ಸಹ ಖಾಸಗಿ ವಿಮಾ ಕಂಪನಿಗಳ ಬಗ್ಗೆ ನಿರ್ಲಕ್ಷ್ಯ ವಹಿಸುವ ಮೂಲಕ ರೈತರ ಶೋಷಣೆಗೆ ಮುಂದಾ ಗಿದ್ದಾರೆ ಎಂದು ಆರೋಪಿಸಿದರು ರೈತರ ಕೃಷಿ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಮಾಡ ಬೇಕು ಎಂದು ಆಗ್ರಹಿಸಿದರು , ಸಿಎಂ ಸಿದ್ದರಾಮಯ್ಯ ಕೃಷಿ ಚಟುವಟಿಕೆ ಗಳಿಗೆ ಅನುಕೂಲ ಮಾಡಿ ಕೊಟ್ಟಿದ್ದಾರೆ ಇದ್ದರ ಬಗ್ಗೆ ತಹಶೀಲ್ದಾರ ಸರಿಯಾಗಿ ಕೆಲಸ ನಿರ್ವಹಿಸಬೇಕೆಂದು ಮನವಿ ಸಲ್ಲಿಸಿದರು.ಕೇಂದ್ರದ ಮಾಜಿ ಸಚಿವ ಅನಂತ್ ಕುಮಾರ್ ಹೆಗಡೆಯವರು ಸಂವಿ ಧಾನವನ್ನು ಬದಲಾಯಿಸುತ್ತೇವೆ ಎಂಬ ಹೇಳಿಕೆ ದೇಶದ ಸಂವಿಧಾ ನಕ್ಕೆ ಮಾಡಿದ ಅಪಚಾರವಾಗಿದ್ದು ಕೂಡಲೇ ಅವರ ವಿರುದ್ಧ ಕ್ರಮ ಕೈಗೊಳಬೇಕೆಂದು ಆಗ್ರಹಿಸಿದರು . ಸಿದ್ದಗೌಡ ಮೋದಗಿ, ಜಯಶ್ರೀ ಗುರವನವರ್, ಶಿವಲೀಲಾ ಮಿಸಲೆ, ಸಂಜಯ ಡೊಂಗರ ಗಾವಿ, ಮಲಿಕಾರ್ಜು ನ್.ಡೊಂಗ ರಗಾವಿ, ಶೇಖರ್ ಅಕನವರ ಸಿದ್ರಾಯಿ ಅಂಗಡಿ ಸೇರಿ ಹಲವರು ಇದ್ದರು

# ಅರ್ಜಿ ಆಹ್ವಾನ

ಗದಗ ಮಾರ್ಚ 14: ಡೇ ನಲ್ಮ ಯೋಜನೆಯ ಬೀದಿ ಬದಿ ವ್ಯಾಪಾರಿಗಳ ಮತ್ತು ಆತ್ಮ ನಿರ್ಭರ ನಿಧಿ ಯೋಜನೆಯಡಿ ಕರ್ನಾಟಕ ಬೀದಿ ಬದಿ ವ್ಯಾಪಾರ ನಿಯಮ –2019 ರಂತೆ ನಗರ ಸ್ಥಳೀಯ ಸಂಸ್ಥೆಯ ಮಟ್ಟದಲ್ಲಿ ಬೀದಿ ಬದಿ ವ್ಯಾಪಾರಿಗಳ ಕುಂದುಕೊರತೆ ಸಮಿತಿಗೆ ಅಧ್ಯಕ್ಷ ಮತ್ತು ಸದಸ್ಯರ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅಧ್ಯಕ್ಷರು : ನಿವೃತ್ತ ಸಿವಿಲ್ ನ್ಯಾಯಾಧೀಶರಾಗಿರಬೇಕು ( 65 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿರಬೇಕು).ಸ್ಥಳೀಯ ಸದಸ್ಯರು : ರಾಜ್ಯ ಸರ್ಕಾರದ ನಿವೃತ್ತ ವರ್ಗ–1 ಅಧಿಕಾರಿಯಾಗಿರಬೇಕು. (65 ವರ್ಷಕ್ಕಂತ ಕಡಿಮೆ ವಯಸ್ಸಿನವರಾಗಿರಬೇಕು). ಸ್ಥಳೀಯ ಪ್ರದೇಶದಲ್ಲಿ ನಿಷ್ಪಾಪ ಸೇವಾ ದಾಖಲೆಯನ್ನು ಹೊಂದಿರಬೇಕು. ಪ್ರಸ್ತಾವಿತ ಸಮಿತಿಯ ಅವಧಿಯು ಬಿಡುಗಡೆಯಾದ ದಿನಾಂಕದಿಂದ ಐದು ವರ್ಷಗಳವರೆಗೆ ಚಲಾವಣೆಯಲ್ಲಿರುತ್ತದೆ. ಅರ್ಜಿಗಳನ್ನು ಪ್ರಕಟಣೆ ಪ್ರಕಟಗೊಂಡ 30 ದಿನಗಳ ಒಳಗಾಗಿ ಮುಖ್ಯಾಧಿಕಾರಿ ಪುರಸಭೆ ಕಾರ್ಯಾಲಯ ನರಗುಂದ ಇವರ ಕಾರ್ಯಾಲಯದ ಡೇ–ನಲ್ಮ ವಿಭಾಗದಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನರಗುಂದ ಪುರಸಭೆ ಮುಖ್ಯಾಧಿಕಾರಿಗಳ ಕಾರ್ಯಾಲಯದ ಡೇ ನಲ್ಮ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

ಕರ್ನಾಟಕ ಸರ್ಕಾರ
ತಾಲೂಕ ಪಂಚಾಯತ ಕಾರಟಗಿ
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಕಾರ್ಯಾಲಯ, ಗ್ರಾಮ ಪಂಚಾಯತ ಬೂದಗುಂಪಾ**
ಸಂಖ್ಯೆ:ತಾ.ಪಂ.ಬೂ/ನರೇಗಾ ಟೆಂಡರ್/2023–24/36 ದಿನಾಂಕ: 11.03.2024
**ಟೆಂಡರ್ ಪ್ರಕಟಣೆ**
ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಸಾರ್ವಜನಿಕ ಸಂಗ್ರಹಣೆಯಲ್ಲಿ, ಪಾರದರ್ಶಕತೆ ಅಧಿನಿಯಮ 1999 ರ ಪ್ರಕಾರ ಪಾರದರ್ಶಕತೆ ಆಕ್ಟ್ 2000 ನಿಯಮದಂತೆ Standard Bid Document KW ರ ನಿಯಮಗಳನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನೊಂದಾಯಿಸಿದ ಅರ್ಹ ಗುತ್ತಿಗೆದಾರರಿಂದ ಇ–ಪ್ರೋಕ್ಯೂರಮೆಂಟ್ ಪೋರ್ಟಲ್, ಮುಖಾಂತರ ಈ ಕೆಳಗೆ ನಮೂದಿಸಿದ ಅನುಬಂಧದಲ್ಲಿಯ 2023–24 ನೇ ಸಾಲಿನ 1) ಬೂದಗುಂಪಾ ಗ್ರಾಮದ ಸ್ಮಶಾನದಿಂದ ಶೇಷಗಿರಿ ಕ್ಯಾಂಪಿನವರೆಗೆ ಹೊಲದವರೆಗೆ ರೈತರ ಹೊಲಗಳಿಗೆ ಹೋಗುವ ಮೆಟಲಿಂಗ್ ರಸ್ತೆ ನಿರ್ಮಾಣ 2) ಹಾಲಸಮುದ್ರ ಗ್ರಾಮದ ಕುರುಬರ ಪ್ಲಾಟಿನಿಂದ ವಲಿಸಾಬ ಹೊನ್ನೂರಸಾಬನ ಹೊಲದವರೆಗೆ ರೈತರ ಹೊಲಗಳಿಗೆ ಹೋಗುವ ಮೆಟಲಿಂಗ್ ರಸ್ತೆ ನಿರ್ಮಾಣ ಮತ್ತು 3) ತಿಮ್ಮಾಪೂರ ಗ್ರಾಮದ ಸಿಂಗಾಪೂರ ರಸ್ತೆಯ ಶಿವಪ್ಪ ಅಂಗಡಿ ಇವರ ಮನೆಯಿಂದ ನಿಜಗುಣಪ್ಪನ ಹೊಲದವರೆಗೆ ರೈತರ ಮೇಟ್ಲಿಂಗ್ ರಸ್ತೆ ನಿರ್ಮಾಣ. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಲ್ಲಿ ಮಂಜೂರಾದ ಕಾಮಗಾರಿಗೆ ಸಾಮಾಗ್ರಿ ಸರಬರಾಜು ಮಾಡಲು ಟೆಂಡರ್ ಆಹ್ವಾನಿಸಿದೆ. ಅರ್ಹ ಗುತ್ತಿಗೆದಾರರು ಇ–ಪ್ರೋಕ್ಯೂರಮೆಂಟ್ ಪೋರ್ಟಲ್ https://kppp.karnataka.gov.in/ ಮುಖಾಂತರ ಭಾಗವಹಿಸಬಹುದು.
ಟೆಂಡರ್ ಹಾಗೂ ಹೆಚ್ಚಿನ ಮಾಹಿತಿಯನ್ನು ಸದರಿ https://kppp.karnataka.gov.in/ ವೆಬ್‌ಸೈಟಿನಲ್ಲಿ ದಿನಾಂಕ : **11/03/2024** ರಿಂದ Download ಮಾಡಿಕೊಳ್ಳಬಹುದಾಗಿದೆ.
1) ಟೆಂಡರ್ ಪ್ರೋಸೆಸಿಂಗ್ : **ಇ–ಪ್ರೋಕ್ಯೂರ್‌ಮೆಂಟ್‌ನಲ್ಲಿರುವಂತೆ.** 2) ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗಧಿತ ಕಾಲಾವಧಿ : **90 ದಿನಗಳು (ಮಳೆಗಾಲ ಸೇರಿದಂತೆ).** 3) ಟೆಂಡರ್ ಆಕ್ಷೇಪಣೆ/ ಸ್ಪಷ್ಟೀಕರಣಗಳಿಗಾಗಿ ನಿಗಧಿಪಡಿಸಿದ ಅಂತಿಮ ದಿನಾಂಕ ಹಾಗೂ ಸಮಯದ ನಂತರ ಡೌನ್‌ಲೋಡ್ ಮಾಡಿಕೊಳ್ಳಬಹುದು : **12/03/2024 ಸಮಯ 11:00 ಗಂಟೆ.** 4) ಟೆಂಡರ್‌ಗಳನ್ನು ಸ್ವೀಕರಿಸುವ ಅಂತಿಮ ದಿನಾಂಕ ಹಾಗೂ ಸಮಯ : **18/03/2024 ಸಮಯ 16:00 ಗಂಟೆ.** 5) ಬಿಡ್‌ಗಳನ್ನು ತೆರೆಯುವ ದಿನಾಂಕ ಹಾಗೂ ಸಮಯ : **19/03/2024 ರಂದು 16:30 ಗಂಟೆಗೆ** ಕಛೇರಿ ಸಮಯದಲ್ಲಿ ಅಥವಾ ರಜಾ ಇದ್ದ ಪಕ್ಷದಲ್ಲಿ ಮರುದಿನ. 6) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಹಾಗೂ ಸಮಯ : **19/03/2024 ರಂದು 15:30 ಗಂಟೆಗೆ** ಕಛೇರಿ ಸಮಯದಲ್ಲಿ ಅಥವಾ ರಜಾ ಇದ್ದ ಪಕ್ಷದಲ್ಲಿ ಮರುದಿನ. 7) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಹಾಗೂ ಸಮಯ : **20/03/2024 ಸಮಯ 11:00 ಗಂಟೆ**
ಸಹಿ/– **ಪಂಚಾಯತ ಅಭಿವೃದಿ ಅಧಿಕಾರಿಗಳು**
ವಾ.ಸಾ.ಇ./ಕೊಪ್ಪಳ/544/2023–24/ದೇಶಪಾಂಡೆ ಪಬ್ಲಿಸಿಟಿ ಗ್ರಾಮ ಪಂಚಾಯತ ಬೂದಗುಂಪಾ